ಮಲೆನಾಡು ಪ್ರದೇಶ ಅಭಿವೃದ್ಧಿ ಯೋಜನೆಯ ಕಾಮಗಾರಿಗಳು

885 (1028) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಮಲೆನಾಡು ಪ್ರದೇಶ ಅಭಿವೃದ್ಧಿ ಕಾಮಗಾರಿಗಳಿಗೆ ಕಳೆದ ವರ್ಷ ಹಾಗೂ ಈ ವರ್ಷ ಆಯವ್ಯಯದಲ್ಲಿ ಎಷ್ಟು ಹಣವನ್ನು ತೆಗೆದಿರಿಸಲಾಗಿತ್ತು. ಇದರಲ್ಲಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ.

ಆ. ಬೆಳಗಾಂ ಜಿಲ್ಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದ ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗಾದರೆ ಈ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಬೇಕಾಗುವುದು ಹಾಗೂ ಎಷ್ಟು ದಿನಗಳಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು.

ಇ. ಬೆಳಗಾಂ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಜೂರಾದ ಕೆಲಸಗಳು ಈಗ ಯಾವ ಹಂತದಲ್ಲಿವೆ. (ಪ್ರತಿಯೊಂದು ಕೆಲಸದ ವಿವರ ನೀಡುವುದು)

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು) :

ಅ. ನಿಗದಿಪಡಿಸಿದ ಹಣ	(ಲಕ್ಷ ರೂ. ಗಳಲ್ಲಿ)
2001-02	1725-00
2002-03	1645-00
ಬಿಡುಗಡೆಯಾದ ಹಣ	
2001-02	1135-00
2002-03	548-00
	(19-7-2002ರ ಅಂತ್ಯದವರೆಗೆ)

ಆ. ಬೆಳಗಾವಿ ಜಿಲ್ಲೆಯು ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವುದಿಲ್ಲ.

ಇ. ಉದ್ಭವಿಸುವುದಿಲ್ಲ.

ಬೈಲಹೊಂಗಲದಲ್ಲಿ ಐ.ಟಿ.ಪಾರ್ಕ್ ಯೋಜನೆ

886 (1030) - ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ): ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹುಬ್ಬಳ್ಳಿಯಲ್ಲಿ ಪ್ರಾರಂಭಿಸಿದಂತೆ ಬೆಳಗಾವಿಯಲ್ಲಿ ಹಾಗೂ ತಾಲ್ಲೂಕು ಮುಖ್ಯ ಕೇಂದ್ರ ಸ್ಥಾನವಾದ ಬೈಲಹೊಂಗಲದಲ್ಲಿಯೂ ಸಹ ಐ.ಟಿ. ಪಾರ್ಕ್ ಯೋಜನೆಯನ್ನು ಕೈಗೊಳ್ಳಲು ಕ್ರಮ ಕೈಗೊಳ್ಳಲಾಗುವುದೇ?